ಪತ್ರಿಕಾ ಪ್ರಕಟಣೆ - PRESS RELEASE

ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ
RESERVE BANK OF INDIA

ಜಾಲತಾಣ : www.rbi.org.in
Website : www.rbi.org.in
ಇಮೇಲ್ /email : helpdoc@rbi.org.in

ಸಂವಹನ ಇಲಾಖೆ, ಕೇಂದ್ರ ಕಚೇರಿ, ಶಾಹಿದ್ ಭಗತ್ ಸಿಂಗ್ ಮಾರ್ಗ, ಫೋರ್ಟ್, ಮುಂಬೈ-400001 ಫೋನ್/ಫೋನ್: 022- 22660502

Department of Communication, Central Office, Shahid Bhagat Singh Marg, Fort, Mumbai-400001 फोन/Phone: 022- 22660502

26 ಡಿಸೆಂಬರ್ 2024

## ಪತ್ರಿಕಾ ಪ್ರಕಟಣೆ

## ಸ್ವಾಮಿ ವಿವೇಕಾನಂದ ಸಹಕಾರಿ ಬ್ಯಾಂಕ್ ನಿಯಮಿತ, ನಿಡಗುಂದಿ,ಕರ್ನಾಟಕ - ಈ ಬ್ಯಾಂಕಿಗೆ ಆರ್ ಬಿ ಐ ವಿತ್ತೀಯ ದಂಡ ವಿಧಿಸಿದೆ

ಭಾರತೀಯ ರಿಸರ್ವ್ ಬ್ಯಾಂಕ್ (ಆರ್ ಬಿ ಐ) ತನ್ನ ಡಿಸೆಂಬರ್ 18, 2024 ರ ಆದೇಶದ ಮೂಲಕ ಸ್ವಾಮಿ ವಿವೇಕಾನಂದ ಸಹಕಾರಿ ಬ್ಯಾಂಕ್ ನಿಯಮಿತ, ನಿಡಗುಂದಿ ಕರ್ನಾಟಕ - ಈ ಬ್ಯಾಂಕಿಗೆ (ಬ್ಯಾಂಕು) ರೂ. 1,00,000/- ( ರೂ. ಒಂದು ಲಕ್ಷ ಮಾತ್ರ) ವಿತ್ತೀಯ ದಂಡ ವಿಧಿಸಿದೆ. ಅನಾವರಣ ಮಟ್ಟ (exposure limit) ಮತ್ತು ಶಾಸನಬದ್ಧ /ಇತರ ನಿರ್ಬಂಧಗಳು -ಪೌರ ಸಹಕಾರಿ ಬ್ಯಾಂಕು (UCB) ಮತ್ತು ನಿಮ್ಮ ಗ್ರಾಹಕರನ್ನು ತಿಳಿಯಿರಿ (KYC) ಕುರಿತಾಗಿ ನೀಡಿದ್ದ ಕೆಲವು ನಿರ್ದೇಶನಗಳ ಅನುಪಾಲನೆ ಮಾಡದೇ ಇದ್ದುದಕ್ಕಾಗಿ ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949 ರ ಕಲಂ 47 ಏ(1)(ಸಿ ) ಜೊತೆ ಓದಲಾದ ಕಲಂ 46(4) (i) ಮತ್ತು 56 ರ ಅಡಿಯಲ್ಲಿ ತನಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭಾರತೀಯ ರಿಸರ್ವ್ ಬ್ಯಾಂಕ್ ಈ ದಂಡವನ್ನು ವಿಧಿಸಿದೆ.

ಮಾರ್ಚ್ 31,2023 ರಂದು ಇದ್ದ ಬ್ಯಾಂಕಿನ ಆರ್ಥಿಕ ಪರಿಸ್ಥಿತಿ ಯನ್ನು ಆಧರಿಸಿ ಬ್ಯಾಂಕಿನ ಶಾಸನಬದ್ಧ ನಿರೀಕ್ಷಣೆಯನ್ನು ಭಾರತೀಯ ರಿಸರ್ವ್ ಬ್ಯಾಂಕ್ ಮಾಡಿತ್ತು. ಆರ್ ಬಿ ಐ ನ ಶಾಸನಬದ್ಧ ನಿರ್ದೇಶನಗಳ ಅನುಪಾಲನೆ ಆಗದೆ ಇರುವ ಬಗ್ಗೆ ನಿರೀಕ್ಷಣಾ ನಿಷ್ಕರ್ಷೆಯನ್ನು ಮತ್ತು ಈ ಸಂಬಂಧ ನಡೆದ ಪತ್ರ ವ್ಯವಹಾರಗಳನ್ನು ಆಧರಿಸಿ ಬ್ಯಾಂಕಿಗೆ ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮದ ನಿರ್ದೇಶನಗಳ ಅನುಪಾಲನೆ ಮಾಡುವಲ್ಲಿ ವಿಫಲವಾದುದಕ್ಕಾಗಿ ಏಕೆ ದಂಡ ವಿಧಿಸಬಾರದು ಎಂದು ಕಾರಣ ಕೇಳಿ ನೋಟೀಸನ್ನು ನೀಡಲಾಗಿತ್ತು. ಬ್ಯಾಂಕು ಈ ಕುರಿತು ಸಲ್ಲಿಸಿದ ಉತ್ತರ ಮತ್ತು ವೈಯಕ್ತಿಕ ವಿಚಾರಣೆಯಲ್ಲಿ ಮಾಡಲಾದ ಮೌಖಿಕ ನಿವೇದನೆಗಳನ್ನು ಪರಿಗಣಿಸಿದ ನಂತರ ಭಾರತೀಯ ರಿಸರ್ವ್ ಬ್ಯಾಂಕಿಗೆ, ಇತರ ವಿಷಯಗಳ ನಡುವೆ, ಬ್ಯಾಂಕಿನ ವಿರುದ್ಧ ಮಾಡಲಾದ ಕೆಳಕಂಡ ಆರೋಪಗಳು ಸ್ಥಿರಪಟ್ಟಿವೆ ಮತ್ತು ವಿತ್ತೀಯ ದಂಡ ವಿಧಿಸುವುದಕ್ಕೆ ಅರ್ಹವಾಗಿದೆ ಎಂದು ಗೊತ್ತಾಯಿತು:

ಬ್ಯಾಂಕು – i) ವಿವೇಕಯುತ ಅಂತರ-ಬ್ಯಾಂಕು (ಒಟ್ಟು) ಮತ್ತು ಪ್ರತಿರೂಪಕ ಅನಾವರಣ ಮಿತಿಗಳ ಪಾಲನೆ ಮಾಡುವಲ್ಲಿ; ಮತ್ತು

ii) ಗ್ರಾಹಕರ ಕೆ ವೈ ಸಿ ದಾಖಲೆ ಗಳನ್ನು ಗೊತ್ತು ಪಡಿಸಿದ ಕಾಲಮಿತಿಯೊಳಗೆ ಕೇಂದ್ರೀಯ ಕೆ ವೈ ಸಿ (KYC) ದಾಖಲೆಗಳ ರಿಜಿಸ್ಟ್ರಿಗೆ (CKYCR) ಅಪ್ ಲೋಡ್ ಮಾಡಲು ವಿಫಲವಾಗಿತ್ತು .

ನಿಯಂತ್ರಣ ಅನುಪಾಲನೆಯಲ್ಲಿ ಕಂಡುಬಂದ ಕೊರತೆಗಾಗಿ ಮೇಲಿನ ಕ್ರಮವನ್ನು ತೆಗೆದುಕೊಳ್ಳಲಾಗಿದೆಯೇ ವಿನಃ ಇದು ಬ್ಯಾಂಕು ತನ್ನ ಗ್ರಾಹಕರೊಂದಿಗೆ ಮಾಡಿಕೊಂಡ ಯಾವುದೇ ವ್ಯವಹಾರ ಅಥವಾ ಒಪ್ಪಂದದ ಸಿಂಧುತ್ವದ ಬಗೆಗಿನ ಘೋಷಣೆಯಲ್ಲ. ಅಲ್ಲದೆ, ಈ ವಿತ್ತೀಯ ದಂಡ ವಿಧಿಸುವ ಕ್ರಿಯೆಯು ಭಾರತೀಯ ರಿಸರ್ವ್ ಬ್ಯಾಂಕು ಈ ಬ್ಯಾಂಕಿನ ಮೇಲೆ ತೆಗೆದುಕೊಳ್ಳಬಹುದಾದ ಯಾವುದೇ ಇತರ ಕ್ರಮದ ಪೂರ್ವಾಗ್ರಹದಿಂದ ಹೊರತಾಗಿದೆ.

**(ಪುನೀತ್ ಪಂಚೋಲಿ)**

**ಮುಖ್ಯ ಮಹಾ ವ್ಯವಸ್ಥಾಪಕರು**

**ಪತ್ರಿಕಾ ಪ್ರಕಟಣೆ: 2024-25/1787**